ರಾಜ್ಯದಲ್ಲಿರುವ ಪ್ರೌಢಶಾಲೆಗಳ ಅಧ್ಯಾಪಕರ ಖಾಲಿ ಹುದ್ದೆಗಳು.

1821 - ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿರುವ ಅಧ್ಯಾಪಕರ ಹಾಗೂ ಇತರ ಖಾಲಿ ಹುದ್ದೆಗಳು ಎಷ್ಟು? ಪ್ರತ್ಯೇಕ ವಿವರ ಕೊಡುವುದು?

ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಏನು ಕ್ರಮ ತೆಗೆದುಕೊಂಡಿದೆ?

ಇ) ಮಂಜೂರಾಗಬೇಕಾದ ಹುದ್ದೆಗಳ ಬಗ್ಗೆ ಮಾಹಿತಿ ಒದಗಿಸುವುದು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿರುವ ಅಧ್ಯಾಪಕರ ಖಾಲಿ ಹುದ್ದೆಗಳ ವಿವರ :-

ಪ್ರಾಥಮಿಕ ಶಾಲೆಗಳು	10,357
ಪ್ರೌಢಶಾಲೆಗಳು :	
ಸಾಮಾನ್ಯ ಶಿಕ್ಷಕರು	915
ವೃತ್ತಿ ಮತ್ತು ಇತರ ಶಿಕ್ಷಕರು	1019

ಆ) ನೇಮಕಾತಿ ನಿಯಮಗಳಿಗನುಸಾರ ಶಿಕ್ಷಕರ ಆಯ್ಕೆ ಮಾಡಿ ತ್ವರಿತವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಅಗತ್ಯವಿರುವ ಹೆಚ್ಚುವರಿ ಹುದ್ದೆಗಳ ಮಂಜೂರಾತಿ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಹಾಸನ ಜಿಲ್ಲೆಯ ತಾಲ್ಲೂಕುವಾರು ಕೊಳವೆಬಾವಿಗಳು.

1823 - ಶ್ರೀ ಬಿ. ಬಿ. ಶಿವಪ್ಪ (ಸಕಲೇಶಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *1995-96 ಮತ್ತು 96-97ನೇ ಸಾಲಿನಲ್ಲಿ ಹಾಸನ ಜಿಲ್ಲೆಯಲ್ಲಿ ತಾಲ್ಲೂಕುವಾರು ಕೊರೆದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು?*
2. *ಇರುವುಗಳಲ್ಲಿ ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿರುವ ಕೊಳವೆ ಬಾವಿಗಳೆಷ್ಟು?*
3. *ಕೊಳವೆಬಾವಿಗಳು ಕೆಟ್ಟಾಗ ದುರಸ್ತಿಗಾಗಿ ತೆಗೆದುಕೊಳ್ಳುತ್ತಿರುವ ಕ್ರಮಗಳೇನು, ಯಾವುವು?*